**ಕರ್ನಾಟಕ ಸರ್ಕಾರದ ನಡವಳಿಗಳು**

***ವಿಷಯ:-*** ಚನ್ನಪಟ್ಟಣ ತಾಲ್ಲೂಕಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಬೇಕಾಗಿದ್ದ ನಾಲ್ಕು ಕುಡಿಯುವ ನೀರಿನ ಕಾಮಗಾರಿಗಳನ್ನು ಪೂರ್ಣಗೊಳಿಸದೆ ಪೂರ್ಣ ಹಣವನ್ನು ಗುತ್ತಿಗೆದಾರರಿಗೆ ಪಾವತಿಸಿ ಹಣ ದುರುಪಯೋಗ ಪಡಿಸಿಕೊಂಡಿರುವ ಆರೋಪಗಳ ಕುರಿತು ವಿವರವಾದ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ-ಆದೇಶ.

***ಓದಲಾಗಿದೆ***

*1.* ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 87 ಇಎನ್‌ಕ್ಯೂ 2017, ದಿನಾಂಕ:20.2.2018

*2.* ಜಿಲ್ಲಾ ಗುಣ ನಿಯಂತ್ರಣ ಮಾನಿಟರ್ ಇವರ ವರದಿ ದಿನಾಂಕ:05.4.2018

*3.* ಸರ್ಕಾರದ ಕಾರಣ ಕೇಳುವ ನೋಟಿಸ್ ಹಾಗೂ ಆರೋಪ ಪಟ್ಟಿ ಸಂಖ್ಯೆ:ಗ್ರಾಅಪ 87 ಇಎನ್‌ಕ್ಯೂ 2017, ದಿನಾಂಕ:10.7.2018.

*4.* ಶ್ರೀ ಎಸ್.ನಾಗರಾಜ್ ನಿವೃತ್ತ ಕಾರ್ಯಪಾಲಕ ಇಂಜಿನಿಯರ್ ಇವರ ವಿವರಣೆ ದಿನಾಂಕ:11.10.2018

***ಪ್ರಸ್ತಾವನೆ:-***

ಚನ್ನಪಟ್ಟಣ ತಾಲ್ಲೂಕು ತಗಚಗೆರೆ, ರಾಂಪುರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಎನ್.ಆರ್.ಕಾಲೋನಿ, ಯಲಚೇಪಾಳ್ಯ, ಅಪ್ಪಗೆರೆ, ಹಾಗೂ ಹರೀಸಂದ್ರ ಗ್ರಾಮಗಳಲ್ಲಿನ ನಾಲ್ಕು ಕೊಳವೆ ನೀರು ಸರಬರಾಜು ಯೋಜನೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರು ಗುತ್ತಿಗೆದಾರರಿಗೆ ಪೂರ್ಣ ಹಣವನ್ನು ಪಾವತಿಸಲಾಗಿದೆ ಎಂಬ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ರಾಮನಗರ ಇವರು ದಿನಾಂಕ:13.7.2017 ರ ಪತ್ರದಲ್ಲಿ ಸರ್ಕಾರಕ್ಕೆ ವರದಿ ಮಾಡಿದ್ದನ್ನು ಪರಿಶೀಲಿಸಿ, ಪ್ರಶ್ನಿತ ಕಾಮಗಾರಿಗಳು ಹಾಗೂ ಸಂಬಂಧಿಸಿದ ದಾಖಲೆಗಳನ್ನು ಖುದ್ದು ತಪಾಸಣೆ ನಡೆಸಿ ವರದಿ ಸಲ್ಲಿಸಲು ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:20.2.2018 ರ ಆದೇಶದಲ್ಲಿ ಶ್ರೀ ಜಿ.ಆರ್.ಹಿರೇಮಠ, ಜಿಲ್ಲಾ ಗುಣ ನಿಯಂತ್ರಣ ಮಾನಿಟರ್ ಇವರನ್ನು ನೇಮಕ ಮಾಡಲಾಗಿತ್ತು.

ಜಿಲ್ಲಾ ಗುಣ ನಿಯಂತ್ರಣ ಮಾನಿಟರ್ ಇವರು ಪ್ರಶ್ನಿತ ನಾಲ್ಕು ಕಾಮಗಾರಿಗಳನ್ನು ತಪಾಸಣೆ ನಡೆಸಿ ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:05.4.2018 ರಂದು ಸರ್ಕಾರಕ್ಕೆ ವರದಿ ಸಲ್ಲಿಸಿದ್ದರು. ಸದರಿ ವರದಿಯನ್ನು ಪರಿಶೀಲಿಸದ ಸಂದರ್ಭದಲ್ಲಿ ಪ್ರಶ್ನಿತ ನಾಲ್ಕು ಕಾಮಗಾರಿಗಳ' ಅನುಷ್ಠಾನದಲ್ಲಿ ಗಂಭೀರ ಸ್ವರೂಪದ ಆರ್ಥಿಕ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕಾರಣರಾದ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಉದ್ದೇಶಿಸಿ ನಿವೃತ್ತ ಅಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 214 (2) (ಬಿ) (i) ರಡಿ ಸರ್ಕಾರದ ಮಂಜೂರಾತಿಯೊಂದಿಗೆ ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:10.7.2018 ರಂದು ಆರೋಪ ಪಟ್ಟಿ ಅನುಬಂಧ-1 ರಿಂದ 4 ನ್ನು ಜಾರಿ ಮಾಡಲಾಗಿತ್ತು.

1. ಶ್ರೀ ಎಸ್.ನಾಗರಾಜ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಮನಗರ. (ಹಾಲಿ ನಿವೃತ್ತ).
2. ಶ್ರೀ ಕೆ.ಎಂ.ದೇವನಾಥ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ. (ಹಾಲಿ ನಿವೃತ್ತ).
3. ಶ್ರೀ ಚಿಕ್ಕವೆಂಕಟೇಶ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಚನ್ನಪಟ್ಟಣ.

ಆರೋಪಿತರ ಪೈಕಿ ಶ್ರೀ ಎಸ್. ನಾಗರಾಜು, ಕಾರ್ಯಪಾಲಕ ಇಂಜಿನಿಯರ್ ಇವರು ವಿವರಣೆ ಸಲ್ಲಿಸಿ, ಕಾಮಗಾರಿಗಳನ್ನು ಇತ್ತೀಚೆಗೆ ಪೂರ್ಣಗೊಳಿಸಿರುವ ಬಗ್ಗೆ ಮಾಹಿತಿ ಸಲ್ಲಿಸಿ ತಮ್ಮ ವಿರುದ್ಧದ ಆರೋಪಗಳನ್ನು ಕೈ ಬಿಡುವಂತೆ ಕೋರಿರುತ್ತಾರೆ. ಉಳಿದ ಇಬ್ಬರು ಆರೋಪಿತರಿಗೆ ಆರೋಪ ಪಟ್ಟಿ ಜಾರಿಯಾಗಿದ್ದರೂ ಯಾವುದೇ ವಿವರಣೆ ಸಲ್ಲಿಸಿರುವುದಿಲ್ಲ. ಆದ್ದರಿಂದ, ಸದರಿ ಇಬ್ಬರು ಆಪಾದಿತರ ವಿವರಣೆ ಏನು ಇರುವುದಿಲ್ಲವೆಂದು ಪರಿಗಣಿಸಲಾಗಿದೆ.

ಆಪಾದಿತರು ಸರ್ಕಾರಿ ನೌಕರರಾಗಿದ್ದು ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ವೆಚ್ಚ ಮಾಡಿ, ಅದರ ಲಾಭವನ್ನು ಜನ ಸಾಮಾನ್ಯರಿಗೆ ತಲುಪಿಸುವ ಹೊಣೆಗಾರಿಕೆ ಹೊಂದಿದ್ದರು. ಈ ದಿಸೆಯಲ್ಲಿ ಕ್ರಮವಹಿಸದೆ ಸರಿಸುಮಾರು 40.00 ಲಕ್ಷಕ್ಕೂ ಹೆಚ್ಚಿನ ವೆಚ್ಚದ ನಾಲ್ಕು ಕಾಮಗಾರಿಗಳನ್ನು ಅರ್ಧಂಬರ್ಧ ಅನುಷ್ಠಾನಗೊಳಿಸಿ, ಪೂರ್ಣ ಹಣವನ್ನು ಗುತ್ತಿಗೆದಾರರಿಗೆ ಪಾವತಿಸಿರುವುದು ಹಾಗೂ ಸದರಿ ಕಾಮಗಾರಿಗಳನ್ನು ಅಪೂರ್ಣ ಸ್ಥಿತಿಯಲ್ಲಿಯೇ ಬಿಟ್ಟು ಸರ್ಕಾರದ ಹಣವನ್ನು ಸ್ಪಷ್ಟವಾಗಿ ದುರುಪಯೋಗಪಡಿಸಿಕೊಂಡಿರುವ ಆರೋಪವು ಅವರ ವಿರುದ್ಧ ಕಂಡು ಬಂದಿರುತ್ತದೆ. ಆದ್ದರಿಂದ, ಆಕ್ಷೇಪಿತ ಕಾಮಗಾರಿಗಳ ಅನುಷ್ಠಾನಕ್ಕೆ ಕಾರಣರಾದ ಮೂವರು ಆರೋಪಿತ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ಈ ಪ್ರಕರಣದಲ್ಲಿ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ, ಈ ಆದೇಶ:-

**ಆದೇಶ ಸಂಖ್ಯೆ: ಗ್ರಾಅಪ 87 ಇಎಸ್‌ಕ್ಯೂ 2017, ಬೆಂಗಳೂರು, ದಿನಾಂಕ:13.11.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಜಂಟಿ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ಮತ್ತು 13 ರ ಅನುಸಾರ ನಡೆಸಲು ಸದರಿ ನಿಯಮಗಳ ನಿಯಮ 11(2) ರಡಿ ಶ್ರೀ ಅವಿನ್ ತಿಪ್ಪಣ್ಣ ಹನಮಪ್ಪ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11 (5) (ಸಿ) ರನ್ವಯ ಶ್ರೀ ಬಾಲಕೃಷ್ಣ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣೆ ನಡೆಸಲು ಅಗತ್ಯವಿರುವ ಸಿಬ್ಬಂದಿ, ಸ್ಥಳಾವಕಾಶ, ಲೇಖನ ಸಾಮಗ್ರಿಗಳನ್ನು ಒದಗಿಸಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರ ಇವರಿಗೆ ಸೂಚಿಸಿದೆ.

ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

13/11/2018
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು–ಎ ಮತ್ತು ಸಿ).
9. ಶ್ರೀ ಅವಿನ್ ತಿಪ್ಪಣ್ಣ ಹನುಮಂತಪ್ಪ, ಮನೆ ನಂ.1449, ಬಿ.ಸಿ.ಸಿ ಹೆಚ್.ಎಸ್. ಲೇಔಟ್, ಬೈಯ್ಯಪ್ಪನಹಳ್ಳಿ (ವಾಸರಹಳ್ಳಿ) ತಲಘಟ್ಟಪುರ ಪೋಸ್ಟ್, ಕನಕಪುರ ಮುಖ್ಯ ರಸ್ತೆ, ಬೆಂಗಳೂರು–62 – ನೊಂದಾಯಿತ ಅಂಚೆ ಮೂಲಕ
10. ಶ್ರೀ ಬಾಲಕೃಷ, ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೇ, ಬೆಂಗಳೂರು(ಮುಖ ಪತ್ರದೊಂದಿಗೆ)
11. ಸಂಬಂಧಿಸಿದ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಇವರ ಮುಖಾಂತರ)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.